ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಉತ್ತೀರ್ಣರಾದವರು ಜಾಹಿರಾತಿಗೆ ಅರ್ಜಿ ಸಲ್ಲಿಸಬೇಕಾಗಿಲ್ಲವೆಂಬ ಪ್ರಕಟಣೆ ಬಗ್ಗೆ.

೧೪೦೦. ಶ್ರೀ ಜಿ. ರಾಜುಗೌಡ (ಮಸ್ಕಿ).—ಮಾನ್ಯ ಉನ್ನತ ಶಿಕ್ಷಣ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ಹೊರ ರಾಜ್ಯಗಳ ಕೆಲವು ಕೈಗಾರಿಕಾ ಸಂಸ್ಥೆಗಳು ತಮ್ಮ ಜಾಹಿರಾತಿನಲ್ಲಿ ಕರ್ನಾಟಕದಲ್ಲಿರುವ ಪಾಲಿಟೆಕ್ನಿಕ್ ಕಾಲೇಜುಗಳಲ್ಲಿ ಉತ್ತೀರ್ಣರಾದವರು ಅರ್ಜಿ ಸಲ್ಲಿಸಬೇಕಾಗಿಲ್ಲವೆಂದು ಪ್ರಕಟಿಸುತ್ತಿರುವುದು ನಿಜವೆ ?

ಆ) ಹಾಗಿದ್ದರೆ ಇದಕ್ಕೆ ಕಾರಣವೇನು ?

ಇ) ಈ ವಿಚಾರದಲ್ಲಿ ಸರ್ಕಾರದ ನಿಲುವೇನು ?

ಶ್ರೀ ಜೀವರಾಜ ಆಳ್ವ (ಉನ್ನತ ಶಿಕ್ಷಣ ಸಚಿವರು).—

ಅ) ಇಂತಹ ಜಾಹಿರಾತುಗಳು ಸರ್ಕಾರದ ಗಮನಕ್ಕೆ ಬಂದಿಲ್ಲ. ಅಲ್ಲದೆ ಇಂತಹ ಜಾಹಿರಾತುಗಳು ಇಂಜಿನಿಯರಿಂಗ್ ಕಾಲೇಜುಗಳಿಗೆ ಸಂಬಂಧಿಸಿದೆಯೆ ಅಥವಾ ಪಾಲಿಟೆಕ್ನಿಕ್‌ಗಳಿಗೆ ಸಂಬಂಧಿಸಿದೆಯೆ ಎಂಬುದು ಸ್ಪಷ್ಟವಾಗಿಲ್ಲ. ನಿರ್ದಿಷ್ಟ ಪ್ರಕರಣಗಳನ್ನು ಸರ್ಕಾರದ ಗಮನಕ್ಕೆ ತಂದಲ್ಲಿ ಪರಿಶೀಲಿಸಲಾಗುವುದು.

ಆ) ಮೇಲೆ (ಅ)ಗೆ ಕೊಟ್ಟಿರುವ ಉತ್ತರದಿಂದ ಇದು ಉದ್ಭವಿಸುವುದಿಲ್ಲ.

ಇ) ಉದ್ಭವಿಸುವುದಿಲ್ಲ.

ರಾಜ್ಯದಲ್ಲಿ ರಾಷ್ಟ್ರೀಯ ಹೆದ್ದಾರಿಗಳ ದುರಸ್ತಿ ಬಗ್ಗೆ

೧೨೯೦. ಶ್ರೀಮತಿ ಕೆ. ಎಸ್. ನಾಗರತ್ನಮ್ಮ (ಗುಂಡ್ಲುಪೇಟೆ).— ಮಾನ್ಯ ನಗರಾಭಿವೃದ್ಧಿ ಮತ್ತು ಲೋಕೋಪಯೋಗಿ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ ?

ಅ) ೧೯೮೭-೮೮ನೇ ಸಾಲಿನ ಆಯವ್ಯಯದಲ್ಲಿ ರಾಜ್ಯದಲ್ಲಿನ ರಾಷ್ಟ್ರೀಯ ಹೆದ್ದಾರಿ ಹಾಗೂ ರಾಜ್ಯದ ಹೆದ್ದಾರಿ ಹಾಗೂ ಜಿಲ್ಲಾ ಪಟ್ಟಣ ರಸ್ತೆಗಳ ದುರಸ್ತಿಗಾಗಿ ಒದಗಿಸಿದ್ದ ಒಟ್ಟು ಹಣವೆಷ್ಟು ?

ಆ) ಆ ಪೈಕಿ ಖರ್ಚು ಮಾಡಿರುವ ಹಣವೆಷ್ಟು ಹಾಗೂ ಎಲ್ಲಾ ರಸ್ತೆಗಳನ್ನು ದುರಸ್ತಿ ಮಾಡಲಾಗಿದೆಯೆ ?

ಇ) ಹಾಗಿದ್ದಲ್ಲಿ ರಸ್ತೆಗಳ ದುರಸ್ತಿ ಕಾರ್ಯ ಸರಿಯಾಗಿ ನಡೆದಿಲ್ಲವೆಂದು ಸರ್ಕಾರಕ್ಕೆ ದೂರು ಬರುತ್ತಿರುವುದು ನಿಜವಲ್ಲವೆ ?

ಈ) ಈ ಬಗ್ಗೆ ಸರ್ಕಾರದವರು ಕೈಗೊಂಡಿರುವ ಕಾರ್ಯಕ್ರಮಗಳೇನು ?

ಶ್ರೀ ಎಂ. ಚಂದ್ರಶೇಖರ್ (ನಗರಾಭಿವೃದ್ಧಿ ಮತ್ತು ಲೋಕೋಪಯೋಗಿ ಸಚಿವರು).—

ಅ) ೧೯೮೭-೮೮ನೇ ಸಾಲಿನ ಆಯವ್ಯಯದಲ್ಲಿ ರಾಜ್ಯದಲ್ಲಿನ ರಾಷ್ಟ್ರೀಯ ಹೆದ್ದಾರಿ, ರಾಜ್ಯ ಹೆದ್ದಾರಿ ಹಾಗೂ ಜಿಲ್ಲಾ ಮುಖ್ಯ ರಸ್ತೆಗಳ ದುರಸ್ತಿಗಾಗಿ ಒದಗಿಸಿದ ಒಟ್ಟು ಹಣ ೨೯೮೪.೪೩ ಲಕ್ಷ ರೂಗಳು.

ಆ) ಆ ಪೈಕಿ ಖರ್ಚು ಮಾಡಿರುವ ಒಟ್ಟು ಹಣ ೨೨೯೧.೮೧ ಲಕ್ಷ ರೂಗಳು. ಸರ್ವೇಸಾಮಾನ್ಯವಾಗಿ ಎಲ್ಲಾ ರಸ್ತೆಗಳಲ್ಲೂ ಅವಶ್ಯಕವಾದ ದುರಸ್ತಿ ಕೆಲಸವನ್ನು ಕೈಗೊಂಡು, ಸಂಚಾರಕ್ಕೆ ಯೋಗ್ಯವಾಗಿರುವಂತೆ ರಸ್ತೆಗಳನ್ನು ಸಂಸ್ಥಿತಿಯಲ್ಲಿಡಲು ಪ್ರಯತ್ನಿಸಲಾಗಿದೆ.

ಇ) ಮತ್ತು ಈ) ಲಭ್ಯವಿರುವ ಹಣವನ್ನು ವಲಂಬಿಸಿ ರಸ್ತೆಗಳನ್ನು ಸಾಧ್ಯವಾದಷ್ಟು ಸುಸ್ಥಿತಿಯಲ್ಲಿಡಲು ಕ್ರಮ ಕೈಗೊಳ್ಳಲಾಗಿದೆ.